Akashvani: Bangalore
Regional Bulletin In Kannada
15.08.2025 : 18.40hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

15.08.2025 : 18.40hrs

*******

**ಮುಖ್ಯಾಂಶಗಳು**

- ಶಿಕ್ಷಣ ಕ್ಷೇತ್ರಕ್ಕೆ ೬೫ ಸಾವಿರ ಕೋಟಿ ಸಂಪನ್ಮೂಲ ವಿನಿಯೋಗ - ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ
- ರಾಜ್ಯಾದ್ಯಂತ ಸಂಭ್ರಮದ ಸ್ವಾತಂತ್ರ್ಯೋತ್ಸವ ಆಚರಣೆ; ಉಸ್ತುವಾರಿ ಸಚಿವರುಗಳಿಂದ ಕಾರ್ಯಕ್ರಮಕ್ಕೆ ಚಾಲನೆ
- ಎತ್ತಿನಹೊಳೆ ಯೋಜನೆಯಡಿ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರಗಳ ಕೆರೆ ತುಂಬುವುದಕ್ಕೆ ಪ್ರಥಮ ಆದ್ಯತೆ - ಸಚಿವ ಬಿ.ಎಸ್. ಸುರೇಶ್
- ಧರ್ಮಸ್ಥಳ ಪ್ರಕರಣ; ಎಸ್ಐಟಿ ನಿಷ್ಪಕ್ಷಪಾತವಾಗಿ ಕಾರ್ಯ ನಿರ್ವಹಿಸುತ್ತಿದೆ - ಸಚಿವ ದಿನೇಶ್ ಗುಂಡೂರಾವ್

**********

ಶಿಕ್ಷಣ ಕ್ಷೇತ್ರದ ಬಲವರ್ಧನೆಗಾಗಿ ಪ್ರಸಕ್ತ ಸಾಲಿನಲ್ಲಿ ೬೫ ಸಾವಿರ ಕೋಟಿ ರೂಪಾಯಿಗಳಷ್ಟು ಬೃಹತ್ ಪ್ರಮಾಣದ ಸಂಪನ್ಮೂಲಗಳನ್ನು ವಿನಿಯೋಗಿಸಲಾಗುತ್ತಿದೆ. ವಸತಿ ಶಾಲೆಗಳು, ವಸತಿ ನಿಲಯಗಳಲ್ಲಿ ೮ ಲಕ್ಷ ೩೮ ಸಾವಿರಕ್ಕೂ ಹೆಚ್ಚು ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆಯುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ತಿಳಿಸಿದ್ದಾರೆ. ಪ್ರಸಕ್ತ ಸಾಲಿನಲ್ಲಿ ೨ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ೫೦೦ ಕರ್ನಾಟಕ ಪಬ್ಲಿಕ್ ಸ್ಕೂಲ್-ಕೆಪಿಎಸ್ ಶಾಲೆಗಳನ್ನು ಸ್ಥಾಪಿಸಲಾಗುತ್ತಿದೆ. ಅತಿಥಿ ಶಿಕ್ಷಕರಿಗೆ ಮತ್ತು ಬಿಸಿಯೂಟ ತಯಾರಿಸುವ ಸಿಬ್ಬಂದಿಗಳಿಗೆ ಗೌರವಧನ ಹೆಚ್ಚಿಸಲಾಗಿದೆ. ಶಿಕ್ಷಕರ ನೇಮಕಾತಿಗೂ ಸರ್ಕಾರ ಆದ್ಯತೆ ನೀಡಿದೆ. ೨ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಪ್ರಥಮ ದರ್ಜೆ ಕಾಲೇಜುಗಳು, ಪಾಲಿಟೆಕ್ನಿಕ್ಗಳನ್ನು ಉನ್ನತೀಕರಿಸಲಾಗುತ್ತಿದೆ. ೧೩ ಹೊಸ ತಾಂತ್ರಿಕ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

***ಧ್ವನಿ*** ಮುಖ್ಯಮಂತ್ರಿ

ರಾಜ್ಯದ ಹೈನುಗಾರಿಕೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೆ.ಎಂ.ಎಫ್.ನಿಂದ "ಗೋವಿನಿಂದ ಗ್ರಾಹಕರವರೆಗೆ" ಎಂಬ ಶೀರ್ಷಿಕೆಯೊಂದಿಗೆ "ನಂದಿನಿ" ಬ್ರ್ಯಾಂಡ್ನಲ್ಲಿ ೧೭೫ ಕ್ಕೂ ಅಧಿಕ ಗುಣಮಟ್ಟದ ಹಾಲಿನ ಉತ್ಪನ್ನಗಳನ್ನು ರಾಜ್ಯ, ಹೊರರಾಜ್ಯ ಮತ್ತು ವಿದೇಶಗಳ ಮಾರುಕಟ್ಟೆಗಳಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

**********

ರಾಜ್ಯಾದ್ಯಂತ ಇಂದು ೭೯ನೇ ಸ್ವಾತಂತ್ರ್ಯ ದಿನಾಚರಣೆ ಸಂಭ್ರಮದಿಂದ ನಡೆಯಿತು. ವಿವಿಧೆಡೆ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬೆಂಗಳೂರು ಆಕಾಶವಾಣಿ ಕೇಂದ್ರದಲ್ಲಿ ಇಂದು ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು. ಉಪ ಮಹಾ ನಿರ್ದೇಶಕ ಸಂಜೀವ್ ಧ್ವಜಾರೋಹಣ ಮಾಡಿ ಮಾತನಾಡಿದರು. ಕಾರ್ಯಕ್ರಮ ವಿಭಾಗದ ಮುಖ್ಯಸ್ಥ ಡಾ. ಶಂಕರನಾರಾಯಣ ಅವರು ಮಾತನಾಡಿ ಸ್ವಾತ್ರಂತ್ರ್ಯದ ಮಹತ್ವವನ್ನು ಹೇಳುತ್ತಾ ಸ್ವಾತಂತ್ರ್ಯ ಸೇನಾನಿಗಳನ್ನು ಸ್ಮರಿಸಿದರು. ಆರ್.ವೆಂಕಟೇಶ್, ಶಿವಶಂಕರ್, ಶಿವಕುಮಾರ್ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಚಿಕ್ಕಮಗಳೂರು ಜಿಲ್ಲಾ ಕ್ರೀಡಾಂಗಣದಲ್ಲಿ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ ಜಾರ್ಜ್ ಧ್ವಜಾರೋಹಣ ನೆರವೇರಿಸಿದರು. ನಂತರ ಮಾತನಾಡಿದ ಅವರು ನಮ್ಮ ಸ್ವಾತಂತ್ರ್ಯಕ್ಕೆ ಕಾರಣರಾದ ಎಲ್ಲಾ ಹಿರಿಯ ಚೇತನಗಳೀಗೆ ನಮನ ಸಲ್ಲಿಸುತೇನೆ ಎಂದರು. ಹಾವೇರಿಯ ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿಂದು ಆಯೋಜಿಸಿದ್ದ ಸ್ವಾತಂತ್ರ್ಯ ದಿನಾಚರಣೆ ಧ್ವಜಾರೋಹಣವನ್ನು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ನೆರವೇರಿಸಿದರು. ನಂತರ ಮಾತನಾಡಿದ ಅವರು, ಭಯೋತ್ಪಾದನೆ ನಿರ್ಮೂಲನೆ ಹಾಗೂ ದೇಶದ ರಕ್ಷಣೆಗೆ ಎಲ್ಲರೂ ಕಂಕಣಬದ್ಧರಾಗೋಣ. ದೇಶದ ಸಮಗ್ರತೆ, ರಾಷ್ಟ್ರಾಭಿಮಾನವನ್ನು ಎತ್ತಿಹಿಡಿಯೋಣ ಎಂದು ಸ್ವಾತಂತ್ರ್ಯೋತ್ಸವದ ಸಂದೇಶ ಸಾರಿದರು. ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್. ಬಿ.ತಿಮ್ಮಾಪೂರ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತವತಿಯಿಂದ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಸ್ವಾತಂತ್ರ್ಯ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಹಲಗಲಿ ಬಂಡಾಯ ಇಂದಿಗೂ ರಾಷ್ಟ್ರ, ರಾಜ್ಯ ಹಾಗೂ ಬಾಗಲಕೋಟೆಯ ಇತಿಹಾಸದಲ್ಲಿ ನೆನೆಪಿಸಿಕೊಳ್ಳುವ ಸಂಗತಿಯಾಗಿದೆ ಎಂದು ಹೇಳಿದರು. ರಾಯಚೂರು ಜಿಲ್ಲಾ ಸಚಿವ ಡಾ.ಶರಣಪ್ರಕಾಶ ಆರ್. ಪಾಟೀಲ ಇಂದು ಸ್ವಾತಂತ್ರ್ಯೋತ್ಸವ ದಿನಾಚರಣೆಯ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಧ್ವಜಾರೋಹಣದ ಬಳಿಕ ಪಥಸಂಚಾಲನ ವೀಕ್ಷಿಸಿ ಗೌರವ ವಂದನೇ ಸ್ವೀಕರಿಸಿದರು. ನಂತರ ಮಾತಾಡಿದ ಅವರು ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಣ ತ್ಯಾಗ ಮಾಡಿದ ಮಹಿನಿಯರನ್ನು ಸ್ಮರಿಸಿದರು. ಜಿಲ್ಲಾಡಳಿತ ಜಿಲ್ಲಾ

ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣವನ್ನು ಕೊಪ್ಪಳ ಜಿಲ್ಲೆಯ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಜಿಲ್ಲಾ ಕ್ರೀಡಾಂಗಣ ದಲ್ಲಿ ಇಂದು ನೆರವೇರಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಜಿಲ್ಲಾಡಳಿತ ಭವನ ಮುಂಭಾಗದ ಆವರಣದಲ್ಲಿಂದು ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ. ಬಸವರಾಜು ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, "ತ್ರಿವರ್ಣ ಧ್ವಜ"ಕ್ಕೆ ಗೌರವ ವಂದನೆ ಸಲ್ಲಿಸಿದರು. ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ನಗರದ ಮಹಾತ್ಮ ಗಾಂಧಿ ಭವನದಲ್ಲಿ ವಿಜಯನಗರ ಜಿಲ್ಲಾಧಿಕಾರಿ ಡಾ.ಆನಂದ.ಕೆ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಸ್ವಾತಂತ್ರ್ಯೋತ್ಸವದ ಶುಭಾಶಯ ಕೋರಿ, ಸ್ವಾತಂತ್ರ್ಯಕ್ಕಾಗಿ ಹೋರಾಡಿದ ರಾಷ್ಟ್ರಪಿತ ಮಹಾತ್ಮ ಗಾಂಧಿ ಸೇರಿದಂತೆ ವೀರ - ಧೀರರ ತ್ಯಾಗ ಬಲಿದಾನದ ಫಲವಾಗಿ ನಮಗೆ ಸ್ವಾತಂತ್ರ್ಯ ಬಂದಿದೆ ಎಂದು ಹೇಳಿದರು.ಸ್ವಾತಂತ್ರ್ಯದ ಪರಿಕಲ್ಪನೆಯ ಸಮಗ್ರತೆಯನ್ನು ಅರ್ಥೈಸಿಕೊಂಡು ಯಾವುದೇ ತಾರತಮ್ಯ ಇಲ್ಲದೆ ಎಲ್ಲರೂ ಒಟ್ಟುಗೂಡಿ ಪ್ರಗತಿಯತ್ತ ಸಾಗುವ ಚಿಂತನೆ ಮಾಡೋಣವೆಂದು ಮಡಿಕೇರಿಯಲ್ಲಿಂದು ಸ್ವಾತಂತ್ರ್ಯೋತ್ಸವದ ಸಂದರ್ಭ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಬೋಸರಾಜು ಕರೆ ನೀಡಿದ್ದಾರೆ. ಧಾರವಾಡ ಜಿಲ್ಲಾಡಳಿತವು ಆರೆನ್ ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ೭೯ನೇ ಸ್ವಾತಂತ್ರ್ಯೋತ್ಸವದ ರಾಷ್ಟ್ರ ಧ್ವಜಾರೋಹಣ ನೇರವೆರಿಸಿ, ಮಾತನಾಡಿದ ಕಾರ್ಮಿಕ ಇಲಾಖೆ ಸಚಿವ ಸಂತೋಷ ಎಸ್ ಲಾಡ್, ಸ್ವಾತಂತ್ರ್ಯ ದಿನವು ಕೇವಲ ರಜಾದಿನವಲ್ಲ, ಬದಲಾಗಿ ನಮ್ಮ ಸ್ವಾತಂತ್ರ್ಯ ಹೋರಾಟಗಾರರಿಗೆ ಧನ್ಯವಾದ ಹೇಳಲು ಮತ್ತು ಅವರ ಮೌಲ್ಯಗಳನ್ನು ನೆನಪಿಸಿಕೊಳ್ಳಲು ಒಂದು ಅವಕಾಶ. ನಮ್ಮ ಧ್ವಜವನ್ನು ಹಾರಿಸುವುದು, ನಮ್ಮ ಇತಿಹಾಸವನ್ನು ನೆನಪಿಸಿಕೊಳ್ಳುವುದು ಮತ್ತು ಏಕತೆಯ ಮನೋಭಾವವನ್ನು ರೂಢಿಸಿಕೊಳ್ಳುವ ದಿನವಾಗಿದೆ ಎಂದು ಹೇಳಿದ್ದಾರೆ.

**********

ಬಹು ಮಹತ್ವಾಕಾಂಕ್ಷೆಯ ಎತ್ತಿನಹೊಳೆ ಯೋಜನೆಯಡಿ ಮೊದಲು ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಕೆರೆಗಳನ್ನು ತುಂಬಿಸಲಾಗುವುದು ಎಂದು ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎಸ್. ಸುರೇಶ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಸನ ಜಿಲ್ಲೆಯಲ್ಲಿ ಆರಂಭವಾಗುವ ಈ ಯೋಜನೆಯಡಿ ವಿವಿಧ ಜಿಲ್ಲೆಗಳ ಕೆರೆಗಳನ್ನು ತುಂಬಿಸಲು ನಿರ್ಧರಿಸಲಾಗಿತ್ತು. ಆದರೆ, ಕೊನೆಯ ಭಾಗದ ಈ ಮೂರು ಜಿಲ್ಲೆಗಳಿಗೆ ನೀರಿನ ಲಭ್ಯತೆ ಬಗ್ಗೆ ಇಲ್ಲಿನ ಜನಪ್ರತಿನಿಧಿಗಳು ಆತಂಕ ವ್ಯಕ್ತಪಡಿಸಿದ್ದರು. ಈ ಭಾಗದ

ಜನಪ್ರತಿನಿಧಿಗಳ ಮನವಿ ಮೇರೆಗೆ ಮುಖ್ಯಮಂತ್ರಿ, ಮೊದಲು ಕೋಲಾರ, ಚಿಕ್ಕಬಳ್ಳಾಪುರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕೆರೆಗಳನ್ನು ತುಂಬಿಸುವ ನಿರ್ಧಾರ ಮಾಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

**********

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಗ್ರಾಮದಲ್ಲಿ ಹಲವಾರು ಮೃತದೇಹಗಳನ್ನು ಹೂತು ಹಾಕಲಾಗಿದೆ ಎಂಬ ದೂರುದಾರನ ಆರೋಪಕ್ಕೆ ಸಂಬಂಧಿಸಿ ಎಸ್‌ಐಟಿ ಯಾವುದೇ ಒತ್ತಡಕ್ಕೆ ಮಣಿಯದೆ ಪಾರದರ್ಶಕವಾಗಿ ಮತ್ತು ನಿಷ್ಪಕ್ಷಪಾತವಾಗಿ ಸತ್ಯಾಂಶವನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಂಗಳೂರಿನಲ್ಲಿಂದು ಮಾತನಾಡಿದ ಅವರು, ತನಿಖೆಯ ಕುರಿತಂತೆ ಸೋಮವಾರ ಗೃಹ ಸಚಿವರು ಸದನದಲ್ಲಿ ಉತ್ತರ ನೀಡಲಿದ್ದಾರೆ. ಆ ಸಂದರ್ಭ ಎಲ್ಲಾ ವಿಚಾರ ಹೊರಬರಲಿದೆ. ಧರ್ಮಸ್ಥಳ ವಿಚಾರದಲ್ಲಿ ಮುಚ್ಚಿ ಹಾಕುವಂತದ್ದು ಏನೂ ಇಲ್ಲ. ನಟ ದರ್ಶನ್ ಅಥವಾ ಪ್ರಜ್ವಲ್ ರೇವಣ್ಣ ಪ್ರಕರಣಗಳೇ ಇರಲಿ, ನಿಜಾಂಶ ಹೊರಬೇಕು. ತಪ್ಪಾಗಿದ್ದರೆ ಶಿಕ್ಷೆಯಾಗಬೇಕು. ಅಮಾಯಕರಿಗೆ ತೊಂದರೆ ಆಗಬಾರದು. ಆಪಾದನೆಗೆ ತಕ್ಕುದಾಗಿ ತನಿಖೆ ನಡೆಯುತ್ತಿದೆ ಎಂದು ಹೇಳಿದರು.

**********

ಶಿವಮೊಗ್ಗದಿಂದ ಅನೇಕ ಹೋರಾಟಗಾರರು ಬ್ರಿಟೀಷರ ವಿರುದ್ಧ ಹೋರಾಡಿದ್ದಾರೆ. ಈಸೂರಿನ ಸ್ವಾತಂತ್ರ್ಯ ಹೋರಾಟಗಾರರ ನೆನಪು ಜನರ ಮನಸ್ಸಿನಲ್ಲಿ ಎಂದಿಗೂ ಚಿರಸ್ಥಾಯಿಯಾಗಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು. ಜಿಲ್ಲಾ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಇಂದು ನಗರದ ನೆಹರು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸಿ ಮಾತನಾಡಿದರು. ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಕಡಿಮೆ ಅವಧಿಯಲ್ಲಿ ಜಾರಿಗೊಳಿಸಿದೆ. ಯೋಜನೆಗಳು ಯಶಸ್ವಿಯಾಗಿ ಜನರಿಗೆ ತಲುಪಿದ್ದು, ಜನರ ಜೀವನದಲ್ಲಿ ಸುಧಾರಣೆ ಕಾಣಬಹುದಾಗಿದೆ. ಯೋಜನೆಗಳಿಂದ ರಾಜ್ಯದ ಪ್ರತಿ ಕುಟುಂಬಕ್ಕೆ ವಾರ್ಷಿಕವಾಗಿ ಅಂದಾಜು ೫೦ ಸಾವಿರ ರೂಪಾಯಿಗೂ ಅಧಿಕ ಮೊತ್ತದ ಆರ್ಥಿಕ ಸೌಲಭ್ಯ ನೇರವಾಗಿ ದೊರೆಯುತ್ತಿದೆ ಎಂದು ಅವರು ತಿಳಿಸಿದರು.

**********

ಜನಸಾಮಾನ್ಯರಿಗೆ ಆರೋಗ್ಯ ಸೇವೆಗಳು ಸಕಾಲದಲ್ಲಿ ತಲುಪಿದಾಗ ಸರ್ಕಾರಕ್ಕೆ ಒಳ್ಳೆಯ ಹೆಸರು ಬರಲಿದೆ. ಆ ನಿಟ್ಟಿನಲ್ಲಿ ಉತ್ತಮ ಆರೋಗ್ಯ ಸೇವೆ ಒದಗಿಸಬೇಕು ಎಂದು ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಬೋಸರಾಜು ವೈದ್ಯಕೀಯ ಸಿಬ್ಬಂದಿಗಳಿಗೆ ಕರೆ ನೀಡಿದ್ದಾರೆ.

ಮಡಿಕೇರಿಯಲ್ಲಿಂದು ವೈದ್ಯಕೀಯ ಶಿಕ್ಷಣ ಇಲಾಖೆ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇವರ ಸಹಯೋಗದೊಂದಿಗೆ ೪೫೦ ಹಾಸಿಗೆ ಸಾಮರ್ಥ್ಯದ ಬೋಧಕ ಆಸ್ಪತ್ರೆ ಕಟ್ಟಡದ ಉಳಿಕೆ ಮತ್ತು ಹೆಚ್ಚುವರಿ ಕಾಮಗಾರಿಯ ಶಿಲಾನ್ಯಾಸವನ್ನು ನೆರವೇರಿಸಿ ಅವರು ಮಾತನಾಡಿದರು. ಮುಖ್ಯಮಂತ್ರಿ ಅವರ ಕಾನೂನು ಸಲಹೆಗಾರರು ಹಾಗೂ ಶಾಸಕರಾದ ಎ.ಎಸ್.ಪೊನ್ನಣ್ಣ ಅವರು ಮಾತನಾಡಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಆಗಬೇಕು ಎಂದು ಹಲವು ವರ್ಷಗಳಿಂದ ಸಾರ್ವಜನಿಕರಿಂದ ಕೇಳಿ ಬರುತ್ತಿತ್ತು, ಅದು ಈಗ ಈಡೇರಿದಂತಾಗಿದೆ ಎಂದು ಹೇಳಿದರು.

******END****